# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 144

ಸದಸ್ಯರ ಹೆಸರು : ಶ್ರೀ ಬಿ.ಎಂ. ಫಾರೂಖ್
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 13.02.2023

ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಗಳೂರು ಉಳ್ಳಾಲ ನಗರ ಸಭೆ ವ್ಯಾಪ್ತಿಯ ಪೊಲೀಸ್ ಸ್ಟೇಷನ್ ಮುಂದೆ, ಸೀಜ್ ಮಾಡಿದ ವಾಹನಗಳನ್ನು ಹಲವಾರು ವರ್ಷಗಳಿಂದ ಹಾಗೆಯೇ ನಿಲ್ಲಿಸಿರುವ ಕಾರಣ ಮುಕ್ತ ವಾಹನ ಸಂಚಾರಕ್ಕೆ ಹಾಗೂ ಜನರ ಓಡಾಟಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ಘಟಕದ ಉಳ್ಳಾಲ ಪೊಲೀಸ್ ಠಾಣೆಯ ವಿವಿಧ ಪ್ರಕರಣಗಳಲ್ಲಿ ಸೀಜ್ ಮಾಡಲಾದ ವಾಹನಗಳನ್ನು ಉಳ್ಳಾಲ ಪೊಲೀಸ್ ಠಾಣಾ ಆವರಣದಲ್ಲಿ ಇರಿಸಲಾಗಿದ್ದು, ಸೀಜ್ ಮಾಡಿದ ಎಲ್ಲಾ ವಾಹನಗಳನ್ನು ಠಾಣಾ ಆವರಣದಲ್ಲಿ ನಿಲ್ಲಿಸಲು ಸಾಕಷ್ಟು ಸ್ಥಳಾವಕಾಶ ಇಲ್ಲದ ಕಾರಣ ಅಕ್ರಮ ಮರಳುಗಾರಿಕೆಗೆ ಸಂಬಂಧಪಟ್ಟಂತೆ ಸೀಜ್ ಮಾಡಿದ ಕೆಲವು ವಾಹನಗಳನ್ನು ಮಾತ್ರ ಠಾಣಾ ಕಟ್ಟಡದ ಬಳಿ ಇರುವ ರಸ್ತೆಯ ಒಂದು ಬದಿಯಲ್ಲಿ ಸಾರ್ವಜನಿಕ ವಾಹನಗಳ ಸುಗಮ ಸಂಚಾರಕ್ಕೆ ಅಡಚಣೆ ಆಗದ ರೀತಿಯಲ್ಲಿ ಇರಿಸಲಾಗಿರುತ್ತದೆ. |
| ಆ | ಹಾಗಿದ್ದಲ್ಲಿ, ಸೀಜ್ ಮಾಡಿದ ವಾಹನಗಳನ್ನು ದೂರ ಸಾಗಿಸುವುದು ಅಥವಾ ವಾಹನಗಳ ವಿಲೇವಾರಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಲು ಹಾಗೂ ಮುಖ್ಯ ರಸ್ತೆಯನ್ನು ಸಂಚಾರಕ್ಕೆ ಮುಕ್ತ ಮಾಡಿಕೊಡಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ➢ ಉಳ್ಳಾಲ ಪೊಲೀಸ್ ಠಾಣೆಯ ವಿವಿಧ ಪ್ರಕರಣಗಳಲ್ಲಿ ಸೀಜ್ ಮಾಡಿದ ವಾಹನಗಳನ್ನು ವಿಲೇವಾರಿ ಮಾಡಲು ಮಾನ್ಯ ನ್ಯಾಯಾಲಯದಿಂದ ಆದೇಶವಾಗಲು ಬಾಕಿ ಇದ್ದು, ಆದೇಶ ಸ್ವೀಕೃತವಾದ ಕೂಡಲೇ ವಾಹನಗಳನ್ನು ವಿಲೇವಾರಿ ಮಾಡಲಾಗುವುದು.<br>➢ ಸೀಜ್ ಮಾಡಿದ ವಾಹನಗಳನ್ನು ಇರಿಸಲು ಪೊಲೀಸ್ ಠಾಣಾ ಆವರಣದಲ್ಲಿ ಸಾಕಷ್ಟು ಸ್ಥಳಾವಕಾಶ ಇಲ್ಲದ ಕಾರಣ ಹತ್ತಿರದಲ್ಲಿ ಲಭ್ಯವಿರುವ ಸೂಕ್ತ ಸರ್ಕಾರಿ ಜಾಗವನ್ನು ಗುರುತಿಸಿಕೊಡುವಂತೆ ತಾಲ್ಲೂಕು ಆಡಳಿತ ಮತ್ತು ನಗರ ಸಭೆಯನ್ನು ಕೋರಲಾಗಿರುತ್ತದೆ. |
| ಇ | ದೀರ್ಘ ಕಾಲದಿಂದ ನಿಲ್ಲಿಸಲಾದ ಮೀನು ಸಾಗಾಣೆ ಇತ್ಯಾದಿ ವಾಹನಗಳಿಂದ ಸುತ್ತಮುತ್ತಲಿನ ಸಾರ್ವಜನಿಕರು ದುರ್ನಾತ ಮತ್ತು ಆರೋಗ್ಯ ಅಡ್ಡ ಪರಿಣಾಮಗಳ ಕುರಿತು ಸರ್ಕಾರ ತೆಗೆದು ಕೊಳ್ಳುವ ನಿರ್ಧಾರಗಳೇನು? | ಉಳ್ಳಾಲ ಪೊಲೀಸ್ ಠಾಣಾ ಆವರಣದಲ್ಲಿ ಯಾವುದೇ ಮೀನು ಸಾಗಾಣೆ ವಾಹನವನ್ನು ದೀರ್ಘ ಕಾಲದಿಂದ ನಿಲ್ಲಿಸಿರುವುದಿಲ್ಲ. ಅಕ್ರಮ ಮರಳು ಸಾಗಾಟಕ್ಕೆ ಸಂಬಂಧಪಟ್ಟಂತೆ ಸೀಜ್ ಮಾಡಿದ ವಾಹನಗಳನ್ನು ಮಾತ್ರ ಇರಿಸಲಾಗಿದೆ. |

ಹೆಚ್‌ಡಿ 56 ಎಸ್‌ಎಸ್‌ಟಿ 2023

(ಆರಗ ಜ್ಞಾನೇಂದ್ರ)
ಗೃಹ ಸಚಿವರು